**ಮಾನ್ಯ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ ಗೋವಿಂದರಾಜು ಇವರು ನಿಯಮ-72ರಡಿ ಮಂಡಿಸಿರುವ ಗಮನ ಸೆಳೆಯುವ ಸೂಚನೆಗೆ ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಸಚಿವರ ಹೇಳಿಕೆ.**

**ವಿಷಯ:-** "ರಾಜ್ಯದ ಅಂಗನವಾಡಿ ಕೇಂದ್ರಗಳಿಗೆ ಪೌಷ್ಠಿಕ ಆಹಾರ ಪಧಾರ್ಥ ಸರಬರಾಜು ಮಾಡುವ ಗುತ್ತಿಗೆಯನ್ನು 137 ಮಹಿಳಾ ಸಂಘಗಳು ನಡೆಸುವ ಎಂಎಸ್‌ಪಿಟಿಸಿ ಗಳಿಂದ ನಡೆಯುತ್ತಿದೆ. ಆದರೆ ಇತ್ತೀಚೆಗೆ ಇದನ್ನು ತೆಗೆದು ಕೇವಲ 3 ಸಂಸ್ಥೆಗಳಿಗೆ ಮಾತ್ರ ನೀಡಿದೆ. ಸಮಗ್ರ ಶಿಶು ಅಭಿವೃದ್ಧಿ ಯೋಜನೆಯಡಿ 6 ತಿಂಗಳಿನಿಂದ 6 ವರ್ಷದೊಳಗಿನ ಮಕ್ಕಳ ಗರ್ಭಿಣಿ ಹಾಗೂ ಬಾಣಂತಿಯರು ಮತ್ತು ಪ್ರಾಯಪೂರ್ವ ಬಾಲಕಿಯರಲ್ಲಿ ಅಪೌಷ್ಠಿಕತೆ ನಿವಾರಿಸುವ ದೃಷ್ಠಿಯಿಂದ ಪೌಷ್ಠಿಕ ಆಹಾರ ನೀಡುವ ಯೋಜನೆಯಾಗಿದೆ.

ಸುಪ್ರೀಂಕೋರ್ಟ್ 2004 ರ ಪ್ರಕರಣವೊಂದರ ತೀರ್ಪಿನಲ್ಲಿ ರಾಜ್ಯ ಸರ್ಕಾರಗಳು ಅಂಗನವಾಡಿಗಳಲ್ಲಿ ಪೌಷ್ಠಿಕಾಂಶ ಪೂರೈಕೆಗಾಗಿ ಗುತ್ತಿಗೆದಾರರನ್ನು ಬಳಸಬಾರದು ಮತ್ತು ಮಹಿಳಾ ಮಂಡಳಿಗಳ ಮೂಲಕ ಧಾನ್ಯಗಳನ್ನು ಖರೀದಿಸಬೇಕು ಎಂದು ಸೂಚಿಸಿದೆ. ಆದರೆ ಸರ್ಕಾರ ಏಕಾಏಕೀ ಆದೇಶ ಹೊರಡಿಸಿ ಆಹಾರ ತಯಾರಿಕೆಗೆ ತಾಂತ್ರಿಕ ನೆರವು ಪಡೆಯಲು ಬಿ.ಐ.ಎಸ್. ಲೈಸೆನ್ಸ್ ಹೊಂದಿರುವ ಮಹಿಳಾ ಗುಂಪುಗಳ ಜತೆ ಮೂರು ವರ್ಷಕಾಲ ಸಹಕಾರ ಪಡೆದುಕೊಳ್ಳಬೇಕೆಂಬುದಾಗಿ ಆದೇಶ ನೀಡಿದೆ. ಆದರೆ ಕೆಲವೊಂದು ಎಂಎಸ್‌ಪಿಟಿಸಿ ಗಳು ಬಿ.ಐ.ಎಸ್. ಲೈಸನ್ಸ್‌ನ್ನು ಒಂದು ವರ್ಷದ ಹಿಂದೆಯೇ ಪಡೆದಿದ್ದರೂ ಸಹ ಇವರಿಗೆ ಅನುಮತಿ ನೀಡುತ್ತಿಲ್ಲ, ಇದು ಯಾವ ನ್ಯಾಯ ಹಾಗೂ ಇದರ ಉದ್ದೇಶವೇನು ಎಂಬ ವಿಷಯದ ಬಗ್ಗೆ.

**ಉತ್ತರ**

ಸಮಗ್ರ ಶಿಶು ಅಭಿವೃದ್ಧಿ ಯೋಜನೆಯು ಕೇಂದ್ರ ಪುರಸ್ಕೃತ ಯೋಜನೆಯಾಗಿರುತ್ತದೆ. ಕರ್ನಾಟಕ ರಾಜ್ಯದಲ್ಲಿ, 2ನೇ ಅಕ್ಟೋಬರ್ 1975 ರಂದು ಪ್ರಾಯೋಗಿಕವಾಗಿ ಮೈಸೂರು ಜಿಲ್ಲೆಯ, ಟಿ. ನರಸೀಪುರ ತಾಲ್ಲೂಕಿನಲ್ಲಿ 100 ಅಂಗನವಾಡಿ ಕೇಂದ್ರಗಳೊಂದಿಗೆ ಸಮಗ್ರ ಶಿಶು ಅಭಿವೃದ್ಧಿ ಯೋಜನೆಯನ್ನು ಪ್ರಾರಂಭಿಸಲಾಯಿತು. ಈಗ ರಾಜ್ಯದ ಎಲ್ಲಾ ತಾಲ್ಲೂಕುಗಳಿಗೂ ವಿಸ್ತರಿಸಲಾಗಿದೆ. 6 ವರ್ಷದ ಒಳಗಿನ ಮಕ್ಕಳ, ಗರ್ಭಿಣಿ, ಬಾಣಂತಿ ಮತ್ತು ಕಿಶೋರಿಯರ ಸರ್ವೋತೋಮುಖ ಅಭಿವೃದ್ಧಿಯು ಈ ಯೋಜನೆಯ ಮುಖ್ಯ ಗುರಿಯಾಗಿರುತ್ತದೆ.

ರಾಜ್ಯದಲ್ಲಿ 204 ಯೋಜನೆಗಳಡಿ ಸಮಗ್ರ ಶಿಶು ಅಭಿವೃದ್ಧಿ ಯೋಜನೆಯನ್ನು ಅನುಷ್ಠಾನಗೊಳಿಸಲಾಗುತ್ತಿದೆ. 69899 ಅಂಗನವಾಡಿ ಕೇಂದ್ರಗಳು ಕಾರ್ಯನಿರ್ವಹಿಸುತ್ತಿವೆ.

ಮಾನ್ಯ ಸರ್ವೋಚ್ಚ ನ್ಯಾಯಾಲಯವು W.P. (C) No. 196/2001ರಲ್ಲಿ ದಿನಾಂಕ: 07/10/2004ರಂದು ನೀಡಿದ ಮಧ್ಯಂತರ ಆದೇಶದಲ್ಲಿ ಈ ಕೆಳಕಂಡಂತೆ ತಿಳಿಸಿರುತ್ತದೆ:

> "The contractors shall not be used for supply of nutrition in Anganwadis and preferably ICDS funds shall be spent by making use of village communities, self-help groups and Mahila Mandals for buying of grains and preparation of meals"

ಸರ್ವೋಚ್ಚ ನ್ಯಾಯಾಲಯದ ಆದೇಶದಂತೆ ಬಲಸಂವರ್ಧಕರನ್ನು ನೇಮಕ ಮಾಡಿ 137 ಮಹಿಳಾ ಪೂರಕ ಪೌಷ್ಠಿಕ ಆಹಾರ ಉತ್ಪಾದನಾ ಹಾಗೂ ತರಬೇತಿ ಕೇಂದ್ರ (ಎಂ.ಎಸ್.ಪಿ.ಟಿ.ಸಿ.) ಗಳನ್ನು ಸ್ಥಾಪಿಸಲಾಗಿರುತ್ತದೆ. ಪ್ರತಿ ಮಹಿಳಾ ಪೂರಕ ಪೌಷ್ಠಿಕ ಆಹಾರ ಉತ್ಪಾದನಾ ಕೇಂದ್ರಗಳಲ್ಲಿ 22-32 ಮಹಿಳೆಯರು ಕೆಲಸ ನಿರ್ವಹಿಸುತ್ತಿದ್ದಾರೆ. ಇವರುಗಳು ಬಡತನದ ಹಿನ್ನೆಲೆಯಿಂದ ಬಂದವರಾಗಿದ್ದು ವಿಧವೆಯರು, ವಿಕಲಚೇತನರು, ಪರಿತ್ಯಕ್ತ ಮಹಿಳೆಯರು, ಫಲಾನುಭವಿಗಳ ತಾಯಂದಿರು ಹಾಗೂ ಸ್ತ್ರೀಶಕ್ತಿ ಗುಂಪಿನ ಸದಸ್ಯರು ಆಗಿರುತ್ತಾರೆ. ಸದರಿ ಮಹಿಳೆಯರನ್ನು ಆರ್ಥಿಕವಾಗಿ ಸಬಲರನ್ನಾಗಿ ಮಾಡುವ ಉದ್ದೇಶದಿಂದ ಎಂ.ಎಸ್.ಪಿ.ಟಿ.ಸಿ. ಸದಸ್ಯರುಗಳಿಗೆ ವಿವಿಧ ರೀತಿಯ ತರಬೇತಿಗಳನ್ನು ನೀಡಿ ಬಲವರ್ಧನೆಗೊಳಿಸಲಾಗಿರುತ್ತದೆ. ಈ ಮಹಿಳಾ ಪೂರಕ ಪೌಷ್ಠಿಕ ಆಹಾರ ಉತ್ಪಾದನಾ ಹಾಗೂ ತರಬೇತಿ ಕೇಂದ್ರಗಳು Karnataka Societies Act 1960 ಅಡಿಯಲ್ಲಿ ನೋಂದಣಿಯಾಗಿ ಕಾರ್ಯನಿರ್ವಹಿಸುತ್ತಿವೆ.

ಅಂಗನವಾಡಿಗಳಿಗೆ ಆಹಾರ ಸರಬರಾಜು ಜವಾಬ್ದಾರಿಯನ್ನು ಯಾವುದೇ ಮಧ್ಯವರ್ತಿ ಸಂಸ್ಥೆಗಳಿಗೆ ನೀಡಿರುವುದಿಲ್ಲ. ಆದರೆ ಮಾನ್ಯ ಉಚ್ಚ ನ್ಯಾಯಾಲಯದ ದಿನಾಂಕ: 11.10.2023ರ ಆದೇಶದ ಅನುಷ್ಠಾನಕ್ಕಾಗಿ ಎಲ್ಲಾ ಎಂ.ಎಸ್.ಪಿ.ಟಿ.ಸಿ. ಗಳು ದಿನಾಂಕ: 02/07/2020ರ ಸುತ್ತೋಲೆಯಲ್ಲಿ ನಿರ್ದೇಶಿಸಿರುವಂತೆ ಅರ್ಹ ಬಿ.ಐ.ಎಸ್. ಪರವಾನಗಿ ಹೊಂದಿರುವ ಮಹಿಳಾ ಗುಂಪುಗಳೊಂದಿಗೆ ಕರಾರು ಒಪ್ಪಂದ ಮಾಡಿಕೊಂಡು ಸರ್ಕಾರಕ್ಕೆ ಯಾವುದೇ ಹೆಚ್ಚಿನ ಆರ್ಥಿಕ ಹೊರೆಯಿಲ್ಲದೆ ಬಿ.ಐ.ಎಸ್. ಮಹಿಳಾ ಗುಂಪುಗಳ ತಾಂತ್ರಿಕ ನೆರವನ್ನು ಪಡೆದು ಅಂಗನವಾಡಿ ಫಲಾನುಭವಿಗಳಿಗೆ ಗುಣಮಟ್ಟದ ಪೂರಕ ಪೌಷ್ಟಿಕ ಆಹಾರ ವಿತರಣೆಗೆ ಸೂಕ್ತ ಕ್ರಮ ವಹಿಸಲು ಎಲ್ಲಾ ಉಪ ನಿರ್ದೇಶಕರುಗಳಿಗೆ ತಿಳಿಸಲಾಗಿದೆ.

ರಾಜ್ಯದಲ್ಲಿ ದೇವನಹಳ್ಳಿ ಮತ್ತು ಹೊಸಕೋಟೆ ತಾಲ್ಲೂಕು ಎಂ.ಎಸ್.ಪಿ.ಟಿ.ಸಿ., ಬೆಂಗಳೂರು ಗ್ರಾಮಾಂತರ ಜಿಲ್ಲೆ ಮತ್ತು ಚಿಂತಾಮಣಿ ತಾಲ್ಲೂಕು ಎಂ.ಎಸ್.ಪಿ.ಟಿ.ಸಿ., ಚಿಕ್ಕಬಳ್ಳಾಪುರ ಜಿಲ್ಲೆ ಇವರುಗಳು ಬಿ.ಐ.ಎಸ್. ಪರವಾನಗಿಯನ್ನು ಸ್ವತಂತ್ರವಾಗಿ ಪಡೆದಿರುತ್ತಾರೆ. ಆದರೆ ಸದರಿ ಸಂಸ್ಥೆಗಳು ತಾಂತ್ರಿಕ ನೆರವು ನೀಡುವ ಸಂಬಂಧ ದಿನಾಂಕ: 02/07/2020 ರ ಸುತ್ತೋಲೆಯಲ್ಲಿ ನಿರ್ದೇಶಿಸಿರುವಂತೆ ಬಿ.ಐ.ಎಸ್. ಲೈಸೆನ್ಸ್ ಹೊಂದಿ ಪೂರಕ ಪೌಷ್ಟಿಕ ಆಹಾರ ವಿತರಣೆಯಲ್ಲಿ ಕನಿಷ್ಠ 3 ವರ್ಷಗಳ ಕಾಲಾವಧಿಯನ್ನು ಪೂರೈಸಿರುವುದಿಲ್ಲ.

ಪ್ರಸ್ತುತ ಇರುವ ಎಂ.ಎಸ್.ಪಿ.ಟಿ.ಸಿ. ಘಟಕಗಳು ಮಾನ್ಯ ಉಚ್ಚ ನ್ಯಾಯಾಲಯದ ದಿನಾಂಕ:11.10.2023ರ ಆದೇಶದ ಅನುಷ್ಠಾನಕ್ಕಾಗಿ ಅರ್ಹ ಬಿ.ಐ.ಎಸ್. ಪರವಾನಗಿ ಹೊಂದಿರುವ ಮಹಿಳಾ ಗುಂಪುಗಳೊಂದಿಗೆ ಕರಾರು ಒಪ್ಪಂದ ಮಾಡಿಕೊಂಡು ಸರ್ಕಾರಕ್ಕೆ ಯಾವುದೇ ಹೆಚ್ಚಿನ ಆರ್ಥಿಕ ಹೊರೆಯಿಲ್ಲದೆ ಬಿ.ಐ.ಎಸ್. ಮಹಿಳಾ ಗುಂಪುಗಳ ತಾಂತ್ರಿಕ ನೆರವನ್ನು ಪಡೆದು ಅಂಗನವಾಡಿ ಫಲಾನುಭವಿಗಳಿಗೆ ಗುಣಮಟ್ಟದ ಪೂರಕ ಪೌಷ್ಟಿಕ ಆಹಾರ ವಿತರಣೆಗೆ ಕ್ರಮ ಕೈಗೊಂಡಿರುತ್ತವೆ.

ಪೂರಕ ಪೌಷ್ಟಿಕ ಆಹಾರ ಯೋಜನೆಯಡಿ ಅಕ್ಕಿ, ಗೋಧಿಯನ್ನು ಭಾರತೀಯ ಆಹಾರ ನಿಗಮ ಮೂಲಕ, ಎಣ್ಣೆಯನ್ನು ಕರ್ನಾಟಕ ತೈಲ ಒಕ್ಕೂಟ ಮೂಲಕ ಮತ್ತು ಹಾಲಿನ ಪುಡಿಯನ್ನು ಕರ್ನಾಟಕ ಸಹಕಾರ ಹಾಲು ಉತ್ಪಾದಕರ ಒಕ್ಕೂಟದ ಮೂಲಕ ಖರೀದಿಸಲಾಗುತ್ತಿದ್ದು, ಉಳಿದ ಕಚ್ಚಾ ಆಹಾರ ಪದಾರ್ಥಗಳನ್ನು ಮಹಿಳಾ ಪೂರಕ ಪೌಷ್ಟಿಕ ಆಹಾರ ಉತ್ಪಾದನಾ ಕೇಂದ್ರಗಳು ಬಿ.ಐ.ಎಸ್. ಪರವಾನಗಿ ಹೊಂದಿರುವ ಮಹಿಳಾ ಗುಂಪುಗಳ ತಾಂತ್ರಿಕ ನೆರವಿನೊಂದಿಗೆ ಟೆಂಡರ್ / ದರಪಟ್ಟಿ ಮೂಲಕ ಖರೀದಿಸಲು ಕ್ರಮವಹಿಸಲಾಗುತ್ತಿದೆ.

ರಾಜ್ಯದಲ್ಲಿ ಒಟ್ಟು 137 ಎಂ.ಎಸ್.ಪಿ.ಟಿ.ಸಿ. ಗಳು ಕಾರ್ಯನಿರ್ವಹಿಸುತ್ತಿದ್ದು, ಅದರಲ್ಲಿ ಉತ್ತರ ಕನ್ನಡ ಜಿಲ್ಲೆಯ ಹಳಿಯಾಳ ಮತ್ತು ಸೂಪಾ ಎಂ.ಎಸ್.ಪಿ.ಟಿ.ಸಿ. ಘಟಕವನ್ನು ತಾತ್ಕಾಲಿಕವಾಗಿ ಸ್ಥಗಿತಗೊಳಿಸಲಾಗಿರುತ್ತದೆ. ಪ್ರಸ್ತುತ ಕಾರ್ಯನಿರತವಾದ 136 ಮಹಿಳಾ ಪೂರಕ ಪೌಷ್ಟಿಕ ಆಹಾರ ಉತ್ಪಾದನಾ ಮತ್ತು ತರಬೇತಿ ಕೇಂದ್ರಗಳು ಕಚ್ಚಾ ಆಹಾರ ಪದಾರ್ಥಗಳನ್ನು ಶುಚಿಗೊಳಿಸಿ, ಸಂಸ್ಕರಿಸಿ, ಪ್ಯಾಕ್ ಮಾಡಿ ಅಂಗನವಾಡಿ ಕೇಂದ್ರಗಳಿಗೆ ಸರಬರಾಜು ಮಾಡುತ್ತಿವೆ.

ಸದರಿ ಘಟಕಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಉದ್ಯೋಗಿಗಳ ಅಸ್ತಿತ್ವಕ್ಕೆ ಯಾವುದೇ ತೊಂದರೆ ಇರುವುದಿಲ್ಲ ಹಾಗೂ ಸದರಿ ಎಂ.ಎಸ್.ಪಿ.ಟಿ.ಸಿ. ಗಳನ್ನು ಮಹಿಳಾ ಸ್ವ-ಸಹಾಯ ಗುಂಪುಗಳೇ ಮುನ್ನಡೆಸುತ್ತಿವೆ.

**ಸಂಖ್ಯೆ:ಮಮಇ 252 ಐಸಿಡಿ 2023**

**(ಲಕ್ಷ್ಮೀ ಆರ್. ಹೆಬ್ಬಾಳಕರ್)**
ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ
ವಿಕಲಚೇತನರ ಹಾಗೂ ಹಿರಿಯ ನಾಗರಿಕರ
ಸಬಲೀಕರಣ ಸಚಿವರು.